# ಪೌಲನು ಥೆಸಲೋನಿಯರಿಗೆ ಬರೆದ ಮೊದಲನೆಯ ಪತ್ರ

## ಮುನ್ನುಡಿ

ಥೆಸಲೋನಿಕ ರೋಮ್ ಸಾಮ್ರಾಜ್ಯಕ್ಕೆ ಸೇರಿದ ಮಕೆದೋನ್ಯ ಪ್ರಾಂತ್ಯದ ಮುಖ್ಯಪಟ್ಟಣ. ಫಿಲಿಪ್ಪಿಯಲ್ಲಿ ಶುಭಸಂದೇಶವನ್ನು ಸಾರಿದ ನಂತರ ಪೌಲನು ಥೆಸಲೋನಿಕಕ್ಕೆ ಹೋಗಿ ಅಲ್ಲಿಯೂ ಒಂದು ಕ್ರೈಸ್ತಸಭೆಯನ್ನು ಸ್ಥಾಪಿಸಿದನು. ಆದರೆ ಸ್ವಲ್ಪ ಕಾಲದಲ್ಲೇ ಸಮಸ್ಯೆಯೊಂದು ಅವನನ್ನು ಕಾಡತೊಡಗಿತು: ಯೆಹೂದ್ಯರಲ್ಲದವರಲ್ಲಿ ಕೆಲವರು ಯೆಹೂದ್ಯ ಧರ್ಮದ ಬಗ್ಗೆ ಆಸಕ್ತರಾಗುತ್ತಿದ್ದರು. ಪೌಲನ ಬೋಧನೆಯನ್ನು ಕೇಳಿದ ಮೇಲಂತೂ ಅವರು ಕ್ರೈಸ್ತಧರ್ಮಕ್ಕೆ ಮಾರುಹೋದರು. ಇದು ಯೆಹೂದ್ಯರಿಗೆ ಹಿಡಿಸಲಿಲ್ಲ. ಮತ್ಸರದಿಂದಲೂ ಕಡುಗೋಪದಿಂದಲೂ ಅವರು ಪೌಲನ ವಿರುದ್ಧ ಸಿಡಿದೆದ್ದರು. ಪರಿಣಾಮವಾಗಿ, ಪೌಲನು ಥೆಸಲೋನಿಕವನ್ನು ಬಿಟ್ಟು ಬೆರೋಯಕ್ಕೆ ಹೋಗಬೇಕಾಯಿತು. ಅನಂತರ ಅವನು ಕೊರಿಂಥವನ್ನು ತಲುಪಿದಾಗ ಥೆಸಲೋನಿಕದವರ ವಾಸ್ತವಿಕ ಪರಿಸ್ಥಿತಿಯನ್ನು ಕುರಿತು ಸಮಾಚಾರ ಬಂದಿತು. ಪೌಲನ ಸಂಗಾತಿಯೂ ಸಹದಾಸನೂ ಆದ ತಿಮೊಥೇಯನು ಆ ಸಮಾಚಾರವನ್ನು ಕಳುಹಿಸಿದ್ದನು.

ಥೆಸಲೋನಿಯರಿಗೆ ಬರೆದ ಈ ಮೊದಲನೆಯ ಪತ್ರದಲ್ಲಿ ಪೌಲನು ಅಲ್ಲಿನ ಕ್ರೈಸ್ತ ವಿಶ್ವಾಸಿಗಳನ್ನು ಹುರಿದುಂಬಿಸಿ, ಅವರು ವಿಶ್ವಾಸದಲ್ಲಿ ಸ್ಥಿರವಾಗಿ ನಿಲ್ಲಬೇಕೆಂದು ಆದೇಶ ನೀಡುತ್ತಾನೆ. ಅವರು ಅದುವರೆಗೂ ಕಾದಿರಿಸಿಕೊಂಡಿದ್ದ ಪ್ರೀತಿ ವಿಶ್ವಾಸಕ್ಕಾಗಿ ಅವರನ್ನು ಅಭಿನಂದಿಸುತ್ತಾನೆ. ಅವರೊಡನೆ ತಾನಿದ್ದಾಗ ನಡೆಸಿದ ತನ್ನ ಆದರ್ಶ ಜೀವನವನ್ನು ಅವರ ನೆನಪಿಗೆ ತರುತ್ತಾನೆ. ಕ್ರಿಸ್ತ ಯೇಸುವಿನ ಪುನರಾಗಮನದ ಬಗ್ಗೆ ಕೆಲವರಿಗಿದ್ದ ಸಂಶಯಗಳನ್ನು ಪರಿಹರಿಸಲು ಯತ್ನಿಸುತ್ತಾನೆ; ಯೇಸುವಿನ ಪುನರಾಗಮನಕ್ಕೆ ಮುಂಚೆ ಮೃತರಾದ ಭಕ್ತರು ನಿತ್ಯಜೀವದಲ್ಲಿ ಭಾಗಿಗಳಾಗಲು ಸಾಧ್ಯವೇ? ಯೇಸು ಪುನರಾಗಮಿಸುವುದಾದರೂ ಯಾವಾಗ? ಈ ಪ್ರಶ್ನೆಗಳಿಗೆ ಉತ್ತರಿಸುತ್ತಾ, ಪ್ರಭು ಯೇಸು ಮರಳಿ ಆಗಮಿಸುವವರೆಗೂ ಅವರು ದೃಢವಾದ ನಂಬಿಕೆ-ನಿರೀಕ್ಷೆಯನ್ನಿಟ್ಟು, ಶಾಂತಿಸಹನೆಯಿಂದ ತಮ್ಮ ಜೀವನದ ಹೋರಾಟವನ್ನು ಮುಂದುವರಿಸಿಕೊಂಡು ಹೋಗಬೇಕೆಂದು ಪ್ರೋತ್ಸಾಹಿಸುತ್ತಾನೆ.

**ಪರಿವಿಡಿ**


| | | |
|---|---|---|
| ಪೀಠಿಕೆ | – | 1.1 |
| ವಂದನೆ ಮತ್ತು ಶ್ಲಾಘನೆ | – | 1.2 – 3.13 |
| ಕ್ರೈಸ್ತ ಸನ್ನಡತೆಗೆ ಪ್ರೋತ್ಸಾಹ | – | 4.1 – 4.12 |
| ಕ್ರಿಸ್ತಯೇಸುವಿನ ಪುನರಾಗಮನ | – | 4.13 – 5.11 |
| ಅಂತಿಮ ಹಿತವಚನಗಳು | – | 5.12 – 5.22 |
| ಸಮಾಪ್ತಿ | – | 5.23 – 5.28 |


**ಪೀಠಿಕೆ**

**1** ಪಿತನಾದ ದೇವರ ಹಾಗೂ ಪ್ರಭುವಾದ ಯೇಸುಕ್ರಿಸ್ತರ ಅನ್ಯೋನ್ಯತೆಯಲ್ಲಿರುವ ಥೆಸಲೋನಿಕದ ಸಭೆಯವರಿಗೆ ಪೌಲ, ಸಿಲ್ವಾನ ಹಾಗೂ ತಿಮೊಥೇಯ ಇವರು ಬರೆಯುವ ಪತ್ರ. ದೈವಾನುಗ್ರಹವೂ ಶಾಂತಿಸಮಾಧಾನವೂ ನಿಮಗೆ ಲಭಿಸಲಿ !

## ವಿಶ್ವಾಸಮಯ ಜೀವನ

2 ನಾವು ಪ್ರಾರ್ಥಿಸುವಾಗಲೆಲ್ಲಾ ನಿಮ್ಮನ್ನು ಸ್ಮರಿಸುತ್ತಾ, ನಿಮ್ಮೆಲ್ಲರಿಗಾಗಿ ದೇವರಿಗೆ ನಿರಂತರ
ಕೃತಜ್ಞತೆಯನ್ನು ಸಲ್ಲಿಸುತ್ತೇವೆ. 3ವಿಶ್ವಾಸಭರಿತವಾದ ನಿಮ್ಮ ಕಾರ್ಯವನ್ನೂ ಪ್ರೀತಿಪೂರಿತವಾದ ನಿಮ್ಮ
ದುಡಿಮೆಯನ್ನೂ ಪ್ರಭು ಯೇಸುವಿನಲ್ಲಿ ನೀವಿಟ್ಟಿರುವ ಅಚಲ ನಿರೀಕ್ಷೆಯನ್ನೂ ತಂದೆಯಾದ ದೇವರ
ಸನ್ನಿಧಿಯಲ್ಲಿ ಜ್ಞಾಪಿಸಿಕೊಳ್ಳುತ್ತೇವೆ. 4ಸಹೋದರರೇ, ನೀವು ದೇವರಿಗೆ ಪ್ರಿಯರು; ದೇವರಿಂದಲೇ
ಆಯ್ಕೆಗೊಂಡವರು ಎಂದು ನಾವು ಬಲ್ಲೆವು. 5ನಮ್ಮ ಶುಭಸಂದೇಶ ಕೇವಲ ಬಾಯಿ ಮಾತಿನದಲ್ಲ; ಅದು
ಶಕ್ತಿಪೂರ್ಣವಾಗಿ ಪವಿತ್ರಾತ್ಮರ ಸಮೇತವಾಗಿ ಪೂರ್ಣ ಪ್ರಮಾಣದಿಂದ ಬಂದದ್ದು. ನಾವು ನಿಮ್ಮ
ನಡುವೆಯಿದ್ದಾಗ, ನಿಮಗೋಸ್ಕರ ಹೇಗೆ ವರ್ತಿಸಿದೆವು ಎಂದು ನೀವೇ ಬಲ್ಲಿರಿ. 6ನೀವು ನಮ್ಮನ್ನು ಹಾಗೂ
ಪ್ರಭು ಯೇಸುವನ್ನು ಅನುಸರಿಸುವವರಾದಿರಿ. ಇದರಿಂದ ನೀವು ಬಹಳ ಹಿಂಸೆಯನ್ನು ಅನುಭವಿಸಬೇಕಾಗಿ
ಬಂದರೂ ಪವಿತ್ರಾತ್ಮ ಪ್ರೇರಿತ ಆನಂದದಿಂದ ದೇವರ ವಾಕ್ಯವನ್ನು ಅಂಗೀಕರಿಸಿದಿರಿ. 7ಹೀಗೆ ಮಕೆದೋನಿಯ
ಹಾಗೂ ಅಖಾಯ ಪ್ರಾಂತ್ಯದ ಕ್ರೈಸ್ತವಿಶ್ವಾಸಿಗಳಿಗೆ ನೀವು ಆದರ್ಶಪ್ರಾಯರಾದಿರಿ. 8ಪ್ರಭುವಿನ ಶುಭಸಂದೇಶ
ನಿಮ್ಮಿಂದಲೇ ಘೋಷಿತವಾಯಿತು. ದೇವರಲ್ಲಿ ನೀವಿಟ್ಟಿರುವ ವಿಶ್ವಾಸ ಮಕೆದೋನಿಯ ಮತ್ತು ಅಖಾಯದಲ್ಲಿ
ಮಾತ್ರವಲ್ಲದೆ ಎಲ್ಲೆಡೆಯಲ್ಲೂ ಪ್ರಸರಿಸಿತು. ಈ ನಿಮ್ಮ ವಿಶ್ವಾಸವನ್ನು ಕುರಿತು ನಾವು ಹೇಳಬೇಕಾದುದು ಏನೂ
ಇಲ್ಲ; ಅಲ್ಲಿಯ ಜನರೇ ಹೇಳುತ್ತಾರೆ. 9ನಾವು ನಿಮ್ಮಲ್ಲಿಗೆ ಬಂದಾಗ, ನೀವು ನಮ್ಮನ್ನು ಹೇಗೆ ಸ್ವಾಗತಿಸಿದಿರಿ;
ವಿಗ್ರಹಗಳನ್ನು ತೊರೆದು, ಸತ್ಯ ಹಾಗೂ ಜೀವಸ್ವರೂಪರಾದ ದೇವರ ಕಡೆಗೆ ಹೇಗೆ ಅಭಿಮುಖರಾದಿರಿ;
10ಸಾವಿನಿಂದ ಜೀವಕ್ಕೆ ಎಬ್ಬಿಸಲಾದ ದೇವರ ಪುತ್ರ ಯೇಸು ಸ್ವರ್ಗದಿಂದ ಪುನರಾಗಮಿಸುವುದನ್ನು ನೀವು
ಹೇಗೆ ಎದುರುನೋಡುತ್ತಿದ್ದೀರಿ – ಎಂಬುದನ್ನು ಆ ಜನರೇ ಹೇಳುತ್ತಾರೆ. ಈ ಯೇಸುವೇ ಮುಂದೆ
ಬರಲಿರುವ ದೈವಕೋಪದಿಂದ ನಮ್ಮನ್ನು ಪಾರುಮಾಡುವವರು.

## ನಿಸ್ವಾರ್ಥ ಸೇವೆ

**2** ಸಹೋದರರೇ, ನಾವು ನಿಮ್ಮಲ್ಲಿಗೆ ಬಂದುದು ವ್ಯರ್ಥವಾಗಲಿಲ್ಲವೆಂಬುದು ನಿಮಗೆ ಗೊತ್ತು. 2ನಿಮಗೆ
ತಿಳಿದಿರುವಂತೆ ನಾವು ನಿಮ್ಮಲ್ಲಿಗೆ ಬರುವ ಮೊದಲೇ ಫಿಲಿಪ್ಪಿ ಪಟ್ಟಣದಲ್ಲಿ ಹಿಂಸೆ, ಅವಮಾನಗಳನ್ನು
ಸಹಿಸಿದೆವು. ತೀವ್ರವಾದ ವಿರೋಧವಿದ್ದರೂ ದೇವರ ನೆರವಿನಿಂದ ನಿರ್ಭೀತರಾಗಿ ಶುಭಸಂದೇಶವನ್ನು ನಿಮಗೆ
ಸಾರಿದೆವು. 3ನಮ್ಮ ಬೋಧನೆಯಾದರೋ ದುರುದ್ದೇಶದಿಂದ ಕೂಡಿದುದಲ್ಲ; ಅಶುದ್ಧ ಅಥವಾ ಕಪಟ
ಮನಸ್ಸಿನಿಂದ ಮೂಡಿದುದೂ ಅಲ್ಲ. 4ಶುಭಸಂದೇಶವನ್ನು ಸಾರಲು ನಾವು ಯೋಗ್ಯರೆಂದು ಎಣಿಸಿ, ದೇವರೇ
ಈ ಹೊಣೆಯನ್ನು ನಮಗೆ ವಹಿಸಿಕೊಟ್ಟಿದ್ದಾರೆ. ಎಂತಲೇ, ನಾವು ಮನುಷ್ಯರನ್ನು ಮೆಚ್ಚಿಸುವುದಕ್ಕಾಗಿ ಅಲ್ಲ,
ಅಂತರಂಗವನ್ನು ಪರಿಶೋಧಿಸುವ ದೇವರನ್ನು ಮೆಚ್ಚಿಸುವುದಕ್ಕಾಗಿ ಈ ಕಾರ್ಯವನ್ನು ನಿರ್ವಹಿಸುತ್ತೇವೆ.
5ನಿಮಗೆ ತಿಳಿದಿರುವ ಪ್ರಕಾರ ನಾವು ಎಂದಿಗೂ ಮುಖಸ್ತುತಿಗಾಗಿ ಮಾತನಾಡುವವರಲ್ಲ, ಧನದಾಶೆಯನ್ನು
ಮರೆಮಾಚುವ ವೇಷಧಾರಿಗಳೂ ಅಲ್ಲ. ಇದಕ್ಕೆ ದೇವರೇ ಸಾಕ್ಷಿ. 6ಕ್ರಿಸ್ತಯೇಸುವಿನ ಪ್ರೇಷಿತರಾದ ನಾವು
ಜನರಿಂದ ಮರ್ಯಾದೆ, ಗೌರವಗಳನ್ನು ಗಳಿಸಬಹುದಾಗಿದ್ದರೂ ನಿಮ್ಮಿಂದಾಗಲಿ, ಇತರರಿಂದಾಗಲಿ ಅವನ್ನು
ನಾವು ಬಯಸಲಿಲ್ಲ. 7ತಾಯಿ ತನ್ನ ಮಕ್ಕಳನ್ನು ಸಾಕಿ ಸಲಹುವಂತೆಯೇ, ನಾವು ನಿಮ್ಮನ್ನು ವಾತ್ಸಲ್ಯದಿಂದ
ಕಂಡೆವು. 8ನೀವು ನಮಗೆ ಇಷ್ಟು ಪ್ರಿಯರಾದ ಕಾರಣ ದೇವರ ಶುಭಸಂದೇಶವನ್ನು ಸಾರುವುದಕ್ಕೆ ಮಾತ್ರವಲ್ಲ,
ನಿಮಗಾಗಿ ನಮ್ಮ ಪ್ರಾಣವನ್ನು ನೀಡುವುದಕ್ಕೂ ಸಿದ್ಧರಾಗಿದ್ದೆವು. 9ಸಹೋದರರೇ, ನಮ್ಮ ಶ್ರಮೆ ಹಾಗೂ
ದುಡಿಮೆಗಳನ್ನು ನೀವು ಮರೆಯುವಂತಿಲ್ಲ. ನಿಮ್ಮಲ್ಲಿ ಯಾರಿಗೂ ನಾವು ಹೊರೆಯಾಗಬಾರದೆಂದು,
ಬದುಕಿಗಾಗಿ ಹಗಲಿರುಳೂ ದುಡಿಯುತ್ತಾ ದೇವರ ಶುಭಸಂದೇಶವನ್ನು ಸಾರಿದೆವು.

10 ವಿಶ್ವಾಸಿಗಳಾದ ನಿಮ್ಮ ನಡುವೆ ನಾವು ಎಷ್ಟು ಶುದ್ಧರಾಗಿ, ನೀತಿವಂತರಾಗಿ, ನಿರ್ದೋಷಿಗಳಾಗಿ
ನಡೆದುಕೊಂಡೆವು ಎಂಬುದಕ್ಕೆ ನೀವೇ ಸಾಕ್ಷಿಗಳು. ಮಾತ್ರವಲ್ಲದೆ ದೇವರೂ ಸಾಕ್ಷಿಯೇ. 11ತಂದೆ ಮಕ್ಕಳನ್ನು
ಕಾಣುವಂತೆ ನಾವು ಪ್ರತಿಯೊಬ್ಬನನ್ನೂ ಆದರದಿಂದ ಕಂಡೆವು; ಬುದ್ಧಿ ಹೇಳಿದೆವು. ಪ್ರೋತ್ಸಾಹಿಸಿದೆವು. 12ತಮ್ಮ

ರಾಜ್ಯ ಹಾಗೂ ವೈಭವದಲ್ಲಿ ಭಾಗವಹಿಸಲು ಕರೆಯಿತ್ತ ದೇವರು ಮೆಚ್ಚುವಂತೆ ಬಾಳಬೇಕೆಂದು ನಿಮಗೆ ವಿಧಿಸಿದೆವು; ಇದೆಲ್ಲಾ ನಿಮಗೆ ತಿಳಿದಿದೆ. [13]ಇನ್ನೊಂದು ಕಾರಣಕ್ಕಾಗಿಯೂ ನಾವು ಸತತವೂ ದೇವರಿಗೆ ಕೃತಜ್ಞತೆಯನ್ನು ಸಲ್ಲಿಸುತ್ತೇವೆ. ನೀವು ದೇವರ ಸಂದೇಶವನ್ನು ನಮ್ಮಿಂದ ಕೇಳಿದಾಗ, ಅದನ್ನು ಮನುಷ್ಯರ ಮಾತುಗಳೆಂದು ಪರಿಗಣಿಸದೆ, ದೇವರ ವಾಕ್ಯವೆಂದೇ ಅರಿತು ಅಂಗೀಕರಿಸಿದಿರಿ. ವಿಶ್ವಾಸಿಗಳಾದ ನಿಮ್ಮಲ್ಲಿ ಚೈತನ್ಯಪೂರ್ಣವಾಗಿರುವ ಈ ವಾಕ್ಯವು, ನಿಜವಾಗಿಯೂ ದೇವರ ಸಂದೇಶವೇ ಸರಿ. [14]ಸಹೋದರರೇ,
ನೀವು ಜುದೇಯದಲ್ಲಿರುವ ದೇವರ ಸಭೆಗಳನ್ನು ಅನುಸರಿಸಿದಿರಿ. ಕ್ರಿಸ್ತಯೇಸುವಿನಲ್ಲಿ ವಿಶ್ವಾಸವಿಟ್ಟಿರುವ ಅವರು ಯೆಹೂದ್ಯರಿಂದ ಅನುಭವಿಸಿದಂಥ ಹಿಂಸೆಯನ್ನು, ನೀವೂ ಸ್ವಜನರಿಂದ ಅನುಭವಿಸಿದಿರಿ. [15]ಆ
ಯೆಹೂದ್ಯರೇ ಪ್ರಭು ಯೇಸುವನ್ನೂ ಪ್ರವಾದಿಗಳನ್ನೂ ಸಂಹರಿಸಿದವರು; ನಮ್ಮನ್ನೂ ಸಹ ಹೊರದಬ್ಬಿದರು. ಅವರು ದೇವರಿಗೆ ದ್ರೋಹವೆಸಗಿದರು; ಜನರೆಲ್ಲರಿಗೆ ವಿರೋಧಿಗಳಾದರು. [16]ಯೆಹೂದ್ಯರಲ್ಲದ ಜನರಿಗೆ
ಜೀವೋದ್ಧಾರವನ್ನು ತರುವ ಶುಭಸಂದೇಶವನ್ನು ನಾವು ಸಾರದಂತೆ ಅವರು ನಮ್ಮನ್ನು ತಡೆಗಟ್ಟುತ್ತಾರೆ. ಹೀಗೆ, ಅವರು ತಮ್ಮ ಪಾಪಕೃತ್ಯಗಳ ಪಟ್ಟಿಯನ್ನು ಸದಾ ಭರ್ತಿಮಾಡುತ್ತಾರೆ. ಕಡೆಗೆ, ದೇವರ ಕೋಪಾಗ್ನಿಯು ಅವರ ಮೇಲೆ ಬರುತ್ತದೆ.

**ಮರುಭೇಟಿಯ ಬಯಕೆ**

17 ಸಹೋದರರೇ, ನಾವು ದೈಹಿಕವಾಗಿ ನಿಮ್ಮಿಂದ ಸ್ವಲ್ಪಕಾಲ ದೂರವಿದ್ದರೂ ಅಂತರಂಗದಲ್ಲಿ ನಿಮ್ಮೊಡನೆಯೇ ಇದ್ದೆವು; ನಿಮ್ಮನ್ನು ಮುಖಾಮುಖಿಯಾಗಿ ಕಾಣಲು ಪ್ರಯತ್ನಿಸಿದೆವು. [18]ನಿಮ್ಮಲ್ಲಿಗೆ
ಹಿಂದಿರುಗಲು ನಮಗೆ ಮನಸ್ಸಿತ್ತು. ಪೌಲನೆಂಬ ನಾನಂತೂ, ನಿಮ್ಮ ಬಳಿಗೆ ಬರಲು ಅನೇಕ ಸಾರಿ ಪ್ರಯಾಸಪಟ್ಟೆ. ಆದರೆ ಸೈತಾನನು ನಮಗೆ ಅಡ್ಡಿ ಆತಂಕವನ್ನೊಡ್ಡಿದನು. [19]ನಮ್ಮ ಪ್ರಭು ಯೇಸು
ಪುನರಾಗಮಿಸುವಾಗ ಅವರ ಸಮ್ಮುಖದಲ್ಲಿ ನಮ್ಮ ಆಶಯ–ಆನಂದಗಳು, ಕೀರ್ತಿ–ಕಿರೀಟಗಳಾದರೂ ಯಾರು? ನೀವೇ ಅಲ್ಲವೇ? [20]ನಿಶ್ಚಯವಾಗಿ ನಮ್ಮ ಗೌರವವೂ ಆನಂದವೂ ನೀವೇ.

**3** ನಿಮ್ಮ ಅಗಲಿಕೆಯನ್ನು ಸಹಿಸಲಾಗದೆ ನಮ್ಮ ಸಹೋದರ ತಿಮೊಥೇಯನನ್ನು ನಿಮ್ಮ ಬಳಿಗೆ ಕಳುಹಿಸಿದೆವು.
ನಾವು ಮಾತ್ರ ಅಥೆನ್ಸಿನಲ್ಲಿ ಉಳಿಯುವುದೇ ಉಚಿತವೆಂದು ನಿರ್ಧರಿಸಿದೆವು. [2]ತಿಮೊಥೇಯನು ಯೇಸುಕ್ರಿಸ್ತರ
ಶುಭಸಂದೇಶದ ಪ್ರಚಾರಕಾರ್ಯದಲ್ಲಿ ನಮ್ಮ ಸಹೋದರ ಹಾಗೂ ದೇವರ ದಾಸ; ನೀವು ವಿಶ್ವಾಸದಲ್ಲಿ ಅಚಲರಾಗಿ ನೆಲೆನಿಲ್ಲುವಂತೆ ಆತನು ನಿಮ್ಮನ್ನು ಉತ್ತೇಜಿಸುವನು. [3]ನಿಮಗೆ ಬಂದೊದಗಿರುವ ವಿಪತ್ತುಗಳಿಂದ
ನೀವು ಯಾರೂ ಚಂಚಲರಾಗದಂತೆ ದೃಢಪಡಿಸುವನು. ಇಂಥ ವಿಪತ್ತುಗಳು ನಮ್ಮ ಪಾಲಿಗೆ ಕಟ್ಟಿಟ್ಟ ಬುತ್ತಿಯೆಂದು ನೀವು ಬಲ್ಲಿರಿ. [4]ನಾವು ನಿಮ್ಮೊಂದಿಗಿದ್ದಾಗ, ಇಂಥ ವಿಪತ್ತುಗಳು ಖಂಡಿತವಾಗಿ
ತಲೆದೋರುವುವೆಂದು ನಿಮಗೆ ಮೊದಲೇ ತಿಳಿಸಿದ್ದೆವು. ಈಗ ಹಾಗೆಯೇ ಸಂಭವಿಸಿದೆ; ನಿಮ್ಮ ಅನುಭವಕ್ಕೂ ಬಂದಿದೆ. [5]ಆದುದರಿಂದ ನನಗೆ ಸಹಿಸಲು ಅಸಾಧ್ಯವಾಗಿ, ತಿಮೊಥೇಯನನ್ನು ನಿಮ್ಮ ಬಳಿಗೆ
ಕಳುಹಿಸಬೇಕಾಯಿತು. ಏಕೆಂದರೆ, ನಿಮ್ಮ ವಿಶ್ವಾಸದ ಬಗ್ಗೆ ನನಗೆ ತಿಳಿಯಬೇಕಾಗಿತ್ತು; ಪ್ರಲೋಭಕನು ಒಡ್ಡುವ ಬಲೆಗೆ ನೀವು ಸಿಲುಕಿ ನಮ್ಮ ಶ್ರಮವೆಲ್ಲ ನಿಷ್ಪ್ರಯೋಜಕವಾಯಿತೋ ಏನೋ ಎಂಬ ದಿಗಿಲು ನನಗಿತ್ತು.

6 ನಿಮ್ಮನ್ನು ಸಂದರ್ಶಿಸಿದ ನಂತರ ತಿಮೊಥೇಯನು ಹಿಂದಿರುಗಿದ್ದಾನೆ. ನಿಮ್ಮ ವಿಶ್ವಾಸ ಮತ್ತು ಪ್ರೀತಿಯ ಬಗ್ಗೆ ಶುಭವರ್ತಮಾನವನ್ನು ತಂದಿದ್ದಾನೆ. ನಾವು ನಿಮ್ಮನ್ನು ಕಾಣಲು ಬಯಸುವಂತೆ, ನೀವೂ ನಮ್ಮನ್ನು ನೋಡಲು ಹಾತೊರೆಯುತ್ತಿರುವಿರೆಂದು ಮತ್ತು ನಮ್ಮನ್ನು ಪ್ರೀತಿಯಿಂದ ಸ್ಮರಿಸಿಕೊಳ್ಳುತ್ತಿರುವಿರೆಂದು
ತಿಳಿಸಿದ್ದಾನೆ. [7]ಸಹೋದರರೇ, ನಾವು ಕಷ್ಟಸಂಕಟಗಳನ್ನು ಅನುಭವಿಸುತ್ತಿದ್ದರೂ ನಿಮ್ಮ ವಿಶ್ವಾಸವನ್ನು ಕುರಿತು
ಕೇಳಿ ನಮಗೆ ಸಮಾಧಾನವಾಯಿತು. [8]ನೀವು ಪ್ರಭುವಿನಲ್ಲಿ ಅಚಲರಾಗಿರುವುದನ್ನು ಕೇಳಿ
ಮನಶ್ಚೇತನಗೊಂಡಿದ್ದೇವೆ. [9]ನಿಮ್ಮ ನಿಮಿತ್ತ ನಮಗೆ ಲಭಿಸಿರುವ ಆನಂದಕ್ಕಾಗಿ ದೇವರಿಗೆ ಎಷ್ಟು
ಕೃತಜ್ಞತೆಯನ್ನು ಸಲ್ಲಿಸಿದರೂ ಸಾಲದು. [10]ನಿಮ್ಮನ್ನು ಕಣ್ಣಾರೆ ಕಂಡು ನಿಮ್ಮ ವಿಶ್ವಾಸದಲ್ಲಿರುವ
ಕುಂದುಕೊರತೆಗಳನ್ನು ನಿವಾರಿಸಬೇಕೆಂದು ನಾವು ದೇವರಲ್ಲಿ ಹಗಲಿರುಳು ಪ್ರಾರ್ಥಿಸುತ್ತಿದ್ದೇವೆ.

11 ಪಿತನಾದ ದೇವರೂ ಪ್ರಭುವಾದ ಯೇಸುವೂ ನಾವು ನಿಮ್ಮಲ್ಲಿಗೆ ಬರುವಂತೆ ನಮ್ಮ ಮಾರ್ಗವನ್ನು
ಸುಗಮಗೊಳಿಸಲಿ. [12]ನಿಮ್ಮ ಮೇಲೆ ನಮಗಿರುವ ಪ್ರೀತಿ ವೃದ್ಧಿಯಾಗುತ್ತಿರುವಂತೆಯೇ, ನಿಮ್ಮ ಪರಸ್ಪರ
ಪ್ರೀತಿಯೂ ಸರ್ವಜನ ಪ್ರೇಮವೂ ಬೆಳೆದು ಸಮೃದ್ಧಿಯಾಗಲೆಂದು ಪ್ರಭುವಿನಲ್ಲಿ ಪ್ರಾರ್ಥಿಸುತ್ತೇವೆ. [13]ನಮ್ಮ
ಪ್ರಭು ಯೇಸು ನಿಮ್ಮನ್ನು ದೃಢಪಡಿಸಲಿ; ತಮ್ಮ ಪರಿಶುದ್ಧ ಪರಿವಾರದ ಸಮೇತ ಯೇಸು
ಪುನರಾಗಮಿಸುವಾಗ, ನಮ್ಮ ಪಿತನಾದ ದೇವರ ಸನ್ನಿಧಾನದಲ್ಲಿ ನೀವೂ ಸಹ ಪರಿಶುದ್ಧರೂ ನಿಷ್ಕಳಂಕರೂ
ಆಗಿ ಕಾಣಿಸಿಕೊಳ್ಳುವಂತೆ ಮಾಡಲಿ.

## ಸದ್ಗುಣವೇ ಸೌಭಾಗ್ಯ

**4** ಕಡೆಯದಾಗಿ ಸಹೋದರರೇ, ನೀವು ಹೇಗೆ ಬಾಳಬೇಕು, ದೇವರು ಮೆಚ್ಚುವಂತೆ ಹೇಗೆ
ನಡೆದುಕೊಳ್ಳಬೇಕು, ಎಂಬುದನ್ನು ನಮ್ಮಿಂದ ಕಲಿತುಕೊಂಡಿರಿ. ಅಂತೆಯೇ ಜೀವಿಸುತ್ತಿದ್ದೀರಿ. ನಿಮ್ಮ ನಡತೆ
ಇನ್ನೂ ಉತ್ತಮಗೊಳ್ಳಬೇಕೆಂದು ಪ್ರಭು ಯೇಸುವಿನ ಹೆಸರಿನಲ್ಲಿ ನಾವು ನಿಮ್ಮನ್ನು ಕೇಳಿಕೊಳ್ಳುತ್ತೇವೆ ಹಾಗೂ
ಪ್ರಬೋಧಿಸುತ್ತೇವೆ. [2]ಪ್ರಭು ಯೇಸುವಿನ ಅಧಿಕಾರದಿಂದ ನಾವು ನಿಮಗೆ ವಿಧಿಸಿದ ನಿಯಮಗಳನ್ನು ನೀವು
ಬಲ್ಲಿರಿ. [3]ನೀವು ಕೆಟ್ಟ ನಡತೆಯನ್ನು ಬಿಟ್ಟು ಪರಿಶುದ್ಧರಾಗಿ ಜೀವಿಸಬೇಕು ಎಂಬುದು ದೇವರ ಚಿತ್ತ. [4]ನಿಮ್ಮಲ್ಲಿ
ಪ್ರತಿಯೊಬ್ಬನೂ ತನ್ನ ಪತ್ನಿಯನ್ನು ಘನತೆ, ಗೌರವದಿಂದಲೂ ಶುದ್ಧ ಮನಸ್ಸಿನಿಂದಲೂ ನಡೆಸಿಕೊಳ್ಳಬೇಕು.
[5]ದೇವರ ಅರಿವೇ ಇಲ್ಲದ ಅನ್ಯಜನರಂತೆ ಕಾಮಾತಿರೇಕದಿಂದ ವರ್ತಿಸಬಾರದು. [6]ಈ ವಿಷಯದಲ್ಲಿ ಯಾರೂ
ತನ್ನ ಸಹೋದರನನ್ನು ವಂಚಿಸಿ ಅತಿಕ್ರಮಿಸದಿರಲಿ. ಹೀಗೆ ವರ್ತಿಸುವವರು ಪ್ರಭುವಿನ ಪ್ರತೀಕಾರಕ್ಕೆ
ಒಳಗಾಗುವರೆಂದು ನಾವು ನಿಮಗೆ ಮುನ್ನೆಚ್ಚರಿಕೆ ಕೊಟ್ಟಿದ್ದೇವೆ. [7]ದೇವರು ನಮ್ಮನ್ನು ಕರೆದಿರುವುದು ಅಶುದ್ಧ
ನಡತೆಗಲ್ಲ, ಪರಿಶುದ್ಧ ನಡತೆಗೆ. [8]ಅಂದಮೇಲೆ, ಈ ಬೋಧನೆಯನ್ನು ತಿರಸ್ಕರಿಸುವವನು ಮನುಷ್ಯನನ್ನು
ಮಾತ್ರವಲ್ಲ, ನಿಮಗೆ ಪವಿತ್ರಾತ್ಮರನ್ನು ಪ್ರದಾನ ಮಾಡಿರುವ ದೇವರನ್ನೇ ತಿರಸ್ಕರಿಸುತ್ತಾನೆ.

9 ಸೋದರ ಪ್ರೇಮವನ್ನು ಕುರಿತು ನಿಮಗೆ ಬರೆಯುವ ಅವಶ್ಯಕತೆಯಿಲ್ಲ. ನೀವು ಒಬ್ಬರನ್ನೊಬ್ಬರು
ಪ್ರೀತಿಸುವುದನ್ನು ದೇವರಿಂದಲೇ ಕಲಿತಿದ್ದೀರಿ. [10]ಮಕೆದೋನಿಯದಲ್ಲಿ ವಾಸಿಸುವ ಎಲ್ಲ ಸಹೋದರರನ್ನೂ
ನೀವು ಪ್ರೀತಿಸುತ್ತಿರುವುದೇನೋ ನಿಜ. ಆದರೂ ಸಹೋದರರೇ, ನಿಮ್ಮ ಈ ಪ್ರೀತಿ ಇನ್ನೂ
ಅಧಿಕಾಧಿಕವಾಗಬೇಕೆಂಬುದೇ ನಮ್ಮ ಆಶಯ. [11]ಮತ್ತೊಬ್ಬರ ವಿಷಯದಲ್ಲಿ ನೀವು ತಲೆಹಾಕದೆ ನಿಮ್ಮ
ಸ್ವಂತಕಾರ್ಯಗಳಲ್ಲೇ ಮಗ್ನರಾಗಿರಿ. ನೆಮ್ಮದಿಯ ಜೀವನವೇ ನಿಮ್ಮ ಗುರಿಯಾಗಿರಲಿ. ನಿಮ್ಮ ಸ್ವಂತ
ದುಡಿಮೆಯಿಂದ ಬದುಕನ್ನು ಸಾಗಿಸಿರಿ. ಇದೇ ನಿಮಗೆ ನಮ್ಮ ಆದೇಶ. [12]ಹೀಗೆ ಬಾಳಿದರೆ ಅನ್ಯಜನರು
ನಿಮ್ಮನ್ನು ಗೌರವಿಸುವರು; ಇತರರನ್ನು ಅವಲಂಬಿಸುವ ಅವಶ್ಯಕತೆ ನಿಮಗಿರುವುದಿಲ್ಲ.

## ಪ್ರಭುವಿನ ಪುನರಾಗಮನ

13 ಸಹೋದರರೇ, ಮೃತರ ಮುಂದಿನ ಸ್ಥಿತಿಗತಿಯ ವಿಷಯವಾಗಿ ನೀವು ತಿಳಿದಿರಬೇಕು ಎಂಬುದೇ
ನಮ್ಮ ಬಯಕೆ. ಏಕೆಂದರೆ, ನಂಬಿಕೆ ನಿರೀಕ್ಷೆಯಿಲ್ಲದ ಇತರರಂತೆ ಮೃತರಿಗಾಗಿ ನೀವು ದುಃಖಿಸಬಾರದು.
[14]ಯೇಸು ಸತ್ತು ಪುನರುತ್ಥಾನ ಹೊಂದಿದರೆಂದು ನಾವು ವಿಶ್ವಾಸಿಸುತ್ತೇವೆ ಅಲ್ಲವೇ? ಹಾಗೆಯೇ,
ಕ್ರಿಸ್ತಯೇಸುವಿನಲ್ಲಿ ವಿಶ್ವಾಸವಿಟ್ಟು ಮರಣಹೊಂದಿದವರನ್ನು ದೇವರು ಯೇಸುಕ್ರಿಸ್ತರೊಡನೆ ಮರಳಿ
ಕರೆದುಕೊಳ್ಳುತ್ತಾರೆ.

15 ಪ್ರಭುವಿನ ವಾಕ್ಯದ ಆಧಾರದ ಮೇಲೆ ನಾವು ನಿಮಗೆ ಹೇಳುತ್ತೇವೆ: ಪ್ರಭು ಪುನರಾಗಮಿಸುವಾಗ,
ಇನ್ನೂ ಬದುಕಿರುವ ನಾವು ಮೃತರಾಗಿರುವ ಇತರರಿಗಿಂತಲೂ ಮುಂದಿನವರಾಗುವುದಿಲ್ಲ.
[16]ಆಜ್ಞಾಘೋಷವಾದಾಗ, ಪ್ರಧಾನ ದೂತನ ಧ್ವನಿಯು ಕೇಳಿಬಂದಾಗ, ದೇವರ ತುತೂರಿ ನಾದಗೈದಾಗ,
ಪ್ರಭುವೇ ಸ್ವರ್ಗದಿಂದ ಇಳಿದು ಬರುತ್ತಾರೆ. ಆಗ, ಕ್ರಿಸ್ತಸ್ಥರಾಗಿ ಮೃತರಾದವರು ಮೊದಲು ಎದ್ದು ಬರುತ್ತಾರೆ.
[17]ಆಮೇಲೆ, ಇನ್ನೂ ಬದುಕಿರುವ ನಾವು ಎದ್ದುಬಂದವರೊಡನೆ ಆಕಾಶಮಂಡಲದಲ್ಲಿ ಪ್ರಭುವನ್ನು

ಎದುರುಗೊಳ್ಳಲು ಮೇಘಾರೂಢರಾಗಿ ಮೇಲಕ್ಕೆ ಒಯ್ಯಲ್ಪಡುತ್ತೇವೆ. ಹೀಗೆ ಸರ್ವದಾ ನಾವು ಪ್ರಭುವಿನೊಂದಿಗೆ ಇರುತ್ತೇವೆ. [18]ಆದ್ದರಿಂದ, ಈ ಮಾತುಗಳಿಂದ ಒಬ್ಬರನ್ನೊಬ್ಬರು ಸಂತೈಸಿಕೊಳ್ಳಿ.

## ಕೊನೆಯದಿನ ಕಳ್ಳನಿಗೆ ಸಮಾನ

**5** ಸಹೋದರರೇ, ಇದೆಲ್ಲ ನಡೆಯಲಿರುವ ಸಮಯ ಸಂದರ್ಭಗಳನ್ನು ಕುರಿತು ನಿಮಗೆ ಬರೆಯುವ
ಅವಶ್ಯಕತೆಯಿಲ್ಲ. [2]ರಾತ್ರಿಯಲ್ಲಿ ಕಳ್ಳನು ಬರುವ ಹಾಗೆ ಪ್ರಭುವಿನ ದಿನವು ಬರುವುದೆಂದು ನೀವು ಚೆನ್ನಾಗಿ
ಬಲ್ಲಿರಿ. [3]ಎಲ್ಲವೂ ಶಾಂತ, ಸುಭದ್ರವೆಂದು ಜನರು ಎಣಿಸುತ್ತಿರುವಾಗಲೇ, ಗರ್ಭಿಣಿಗೆ ಪ್ರಸವವೇದನೆ
ಉಂಟಾಗುವಂತೆ, ವಿನಾಶವು ಫಕ್ಕನೆ ಅವರ ಮೇಲೆ ಬಂದೆರಗುವುದು. ಇದರಿಂದ ಯಾರೂ
ತಪ್ಪಿಸಿಕೊಳ್ಳುವಂತಿಲ್ಲ.

4 ಸಹೋದರರೇ, ಕಳ್ಳನಂತೆ ಆ ದಿನವು ನಿಮ್ಮನ್ನು ದಿಗ್ಭ್ರಮೆಗೊಳಿಸದಿರಲಿ. ಏಕೆಂದರೆ, ನೀವಿನ್ನು
ಅಂಧಕಾರಕ್ಕೆ ಸೇರಿದವರಲ್ಲ. ಆ ದಿನವು ದಿಢೀರನೆ ನಿಮ್ಮ ಮೇಲೆ ಬರಬಾರದು. [5]ನೀವೆಲ್ಲರೂ ಬೆಳಕಿನ
ಹಾಗೂ ಹಗಲಿನ ಮಕ್ಕಳು. ನಾವು ಕತ್ತಲೆಗಾಗಲಿ, ರಾತ್ರಿಗಾಗಲಿ ಸೇರಿದವರಲ್ಲ. [6]ಅಂದ ಮೇಲೆ, ಇತರರಂತೆ
ನಾವು ನಿದ್ದೆಮಾಡದೆ ಎಚ್ಚರವಾಗಿದ್ದು ಸ್ವಸ್ಥಚಿತ್ತರಾಗಿ ವರ್ತಿಸೋಣ. [7]ನಿದ್ರೆಯೂ ಕುಡುಕುತನವೂ ರಾತ್ರಿಗೆ
ಸಂಬಂಧಿಸಿದವುಗಳು. [8]ನಾವು ಹಗಲಿಗೆ ಸೇರಿದವರಾದುದರಿಂದ ಸ್ವಸ್ಥಚಿತ್ತದಿಂದ ಇರೋಣ. ವಿಶ್ವಾಸ ಹಾಗೂ
ಪ್ರೀತಿ ನಮಗೆ ವಕ್ಷಕವಚವಾಗಬೇಕು, ಜೀವೋದ್ಧಾರದ ನಿರೀಕ್ಷೆ ನಮಗೆ ಶಿರಸ್ತ್ರಾಣವಾಗಿರಬೇಕು. [9]ಕೋಪಾಗ್ನಿಗೆ
ನಾವು ಗುರಿಯಾಗಬೇಕೆಂದಲ್ಲ, ನಮ್ಮ ಪ್ರಭು ಯೇಸುಕ್ರಿಸ್ತರಲ್ಲಿ ನಾವು ಜೀವೋದ್ಧಾರ ಹೊಂದಬೇಕೆಂಬುದೇ
ದೈವೇಚ್ಛೆ. [10]ಯೇಸುಕ್ರಿಸ್ತರು ಮರಳಿ ಬರುವಾಗ, ನಾವು ಮೃತರಾಗಿದ್ದರೂ ಜೀವಂತವಾಗಿದ್ದರೂ
ಅವರೊಡನೆಯೇ ನಾವು ಜೀವಿಸಬೇಕೆಂದೆ ನಮಗಾಗಿ ಅವರು ಸಾವನ್ನಪ್ಪಿದರು. [11]ಆದುದರಿಂದ ನೀವು ಈಗ
ನಡೆದುಕೊಳ್ಳುತ್ತಿರುವಂತೆ, ಒಬ್ಬರನ್ನೊಬ್ಬರು ಪ್ರೋತ್ಸಾಹಿಸಿ, ಒಬ್ಬರ ಭಕ್ತಿಯನ್ನೊಬ್ಬರು ವೃದ್ಧಿಗೊಳಿಸಿರಿ.

## ಪೌಲನ ಹಿತಸಲಹೆಗಳು

12 ಸಹೋದರರೇ, ನಿಮ್ಮೊಡನೆ ದುಡಿಯುತ್ತಾ ಪ್ರಭುವಿನ ಹೆಸರಿನಲ್ಲಿ ನಿಮಗೆ ಅಧಿಕಾರಿಗಳೂ
ಮಾರ್ಗದರ್ಶಕರೂ ಆಗಿರುವವರಿಗೆ ತಕ್ಕ ಸನ್ಮಾನವನ್ನು ಸಲ್ಲಿಸಿರಿ. [13]ಅವರು ನಿರ್ವಹಿಸುವ ಕಾರ್ಯದ ನಿಮಿತ್ತ
ಅವರನ್ನು ಅತ್ಯಧಿಕ ಪ್ರೀತಿಯಿಂದ ಗೌರವಿಸಿರಿ. ನಿಮ್ಮನಿಮ್ಮೊಳಗೆ ಸಮಾಧಾನದಿಂದಿರಿ. [14]ಸಹೋದರರೇ,
ಮೈಗಳ್ಳರಿಗೆ ಬುದ್ಧಿಹೇಳಿರಿ; ಮನಗುಂದಿದವರಿಗೆ ಧೈರ್ಯ ತುಂಬಿರಿ; ದುರ್ಬಲರಿಗೆ ನೆರವಾಗಿರಿ; ಎಲ್ಲರೊಡನೆ
ಸಹನೆಯಿಂದಿರಿ. ಇದು ನಮ್ಮ ಪ್ರಬೋಧನೆ. [15]ಕೆಡುಕಿಗೆ ಪ್ರತಿಯಾಗಿ ಕೆಡುಕು ಮಾಡದೆ ಎಚ್ಚರದಿಂದಿರಿ.
ಯಾವಾಗಲೂ ಒಬ್ಬರಿಗೊಬ್ಬರು ಮಾತ್ರವಲ್ಲದೆ ಎಲ್ಲರಿಗೂ ಹಿತವನ್ನೇ ಮಾಡಿರಿ.

16 ಸದಾ ಹರ್ಷಚಿತ್ತರಾಗಿರಿ. [17]ಎಡೆಬಿಡದೆ ಪ್ರಾರ್ಥಿಸಿರಿ. [18]ಎಲ್ಲಾ ಸಂದರ್ಭಗಳಲ್ಲೂ ಉಪಕಾರಸ್ಮರಣೆ
ಮಾಡಿರಿ. ಕ್ರಿಸ್ತಯೇಸುವಿನಲ್ಲಿ ದೇವರು ನಿಮ್ಮಿಂದ ಇಚ್ಛಿಸುವುದು ಇದನ್ನೇ.

19 ಪವಿತ್ರಾತ್ಮರನ್ನು ನಿಶ್ಚೇತನಗೊಳಿಸಬೇಡಿ. [20]ಪ್ರವಾದನೆಗಳನ್ನು ಅಲ್ಲಗಳೆಯದಿರಿ. [21]ಅವುಗಳನ್ನೆಲ್ಲಾ
ಪರಿಶೋಧಿಸಿ ಒಳ್ಳೆಯದನ್ನು ಅಂಗೀಕರಿಸಿ, [22]ಕೆಟ್ಟದ್ದನ್ನೆಲ್ಲಾ ಬಿಟ್ಟುಬಿಡಿ.

23 ಶಾಂತಿದಾಯಕ ದೇವರು ನಿಮ್ಮನ್ನು ಪೂರ್ಣವಾಗಿ ಪಾವನಗೊಳಿಸಲಿ. ನಮ್ಮ ಪ್ರಭುಯೇಸು
ಪುನರಾಗಮಿಸುವಾಗ ನಿಮ್ಮ ಆತ್ಮ, ಪ್ರಾಣ, ದೇಹ – ಇವುಗಳು ದೋಷರಹಿತವಾಗಿಯೂ ಸ್ವಸ್ಥವಾಗಿಯೂ
ಇರುವಂತೆ ನಿಮ್ಮನ್ನು ಕಾಪಾಡಲಿ. [24]ನಿಮ್ಮನ್ನು ಕರೆದ ದೇವರು ಇದನ್ನು ಈಡೇರಿಸುವರು; ಏಕೆಂದರೆ,
ದೇವರು ನಂಬಿಕಸ್ಥರು. [25]ಸಹೋದರರೇ, ನಮಗಾಗಿಯೂ ಪ್ರಾರ್ಥಿಸಿರಿ. [26]ಪವಿತ್ರವಾದ ಮುದ್ದಿಟ್ಟು
ಸಹೋದರರೆಲ್ಲರನ್ನು ವಂದಿಸಿರಿ. [27]ಈ ಪತ್ರವನ್ನು ಎಲ್ಲ ಸಹೋದರರಿಗೂ ಓದಿಹೇಳಬೇಕೆಂದು ಪ್ರಭುವಿನ
ಹೆಸರಿನಲ್ಲಿ ವಿಧಿಸುತ್ತಿದ್ದೇನೆ. [28]ನಮ್ಮ ಪ್ರಭುವಾದ ಯೇಸುಕ್ರಿಸ್ತರ ಅನುಗ್ರಹ ನಿಮ್ಮಲ್ಲಿರಲಿ!